Karnataka State Diploma In Nursing Examination Board
First Floor, Library Block, BMC&RI Campus, K.R.Road, Bengaluru-560002
**Ph No:** 080-26700074, 26700075 **Email:** ksdneb@gmail.com

**KSDNEB/Est/ 10 /2025-26** **Date: -09-2025**

ಇವರಿಗೆ
ಪ್ರಾಂಶುಪಾಲರು
ಸರ್ಕಾರಿ ಶುಶ್ರೂಷಾ ಶಾಲೆಗಳು
ಹಾಗೂ ಖಾಸಗಿ ಶುಶ್ರೂಷಾ ಶಾಲೆ

**ಸುತ್ತೋಲೆ**

ವಿಷಯ: ರಾಜ್ಯದಲ್ಲಿನ ಸರ್ಕಾರಿ ಹಾಗೂ ಖಾಸಗಿ ಶುಶ್ರೂಷಾ ಶಾಲೆಗಳಲ್ಲಿ ಸರ್ಕಾರಿ ಕೋಟಾದಡಿ ಜಿ.ಎನ್.ಎಮ್. ಕೋರ್ಸ್‌ನ ಪ್ರವೇಶ ಶುಲ್ಕವನ್ನು ಮತ್ತು ವಿದ್ಯಾರ್ಥಿಗಳಿಗೆ ಶಿಷ್ಯ ವೇತನವನ್ನು ನಿಗಧಿಪಡಿಸಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ ಎಂಇಡಿ 279 ಎಂಎಸ್ ಎಫ್ 2025, ದಿನಾಂಕ: 11-09-2025

*******

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಸರ್ಕಾರವು ಆದೇಶಿಸಿದಂತೆ, 2025-26 ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ **ರಾಜ್ಯದಲ್ಲಿನ ಸರ್ಕಾರಿ ಕೋಟಾದಡಿ ಜಿ.ಎನ್.ಎಮ್. ಕೋರ್ಸ್ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಸರ್ಕಾರಿ ಶುಶ್ರೂಷಾ ಶಾಲೆಗಳಲ್ಲಿ ವಾರ್ಷಿಕ ಶುಲ್ಕವನ್ನು ರೂ.5,000/- ಗಳಿಗೆ ನಿಗಧಿಪಡಿಸಿದೆ. ಹಾಗೂ ಖಾಸಗಿ ಶುಶ್ರೂಷಾ ಶಾಲೆಗಳಲ್ಲಿ ಸರ್ಕಾರಿ ಕೋಟಾದಡಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಹಾಜರಾತಿ ಶುಲ್ಕ, ಬೋಧನಾ ಶುಲ್ಕ, ಗ್ರಂಥಾಲಯ ಶುಲ್ಕ, ಪ್ರಯೋಗಾಲಯ ಶುಲ್ಕ ಹಾಗೂ ಕ್ರೀಡಾ ಶುಲ್ಕ ಒಳಗೊಂಡಂತೆ ವಾರ್ಷಿಕ ಶುಲ್ಕವನ್ನು ರೂ.6,000/- ಗಳಿಗೆ ಪರಿಷ್ಕರಿಸಿ ಆದೇಶಿಸಿದೆ.**

2025-26 ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಗೆ ಬರುವ ರಾಜ್ಯದಲ್ಲಿನ ಸರ್ಕಾರಿ ಶುಶ್ರೂಷಾ ಶಾಲೆಗಳಲ್ಲಿನ ಎಲ್ಲಾ ವರ್ಷದ ಜಿ.ಎನ್.ಎಮ್. ವಿದ್ಯಾರ್ಥಿಗಳಿಗೆ ಅನ್ವಯಿಸುವಂತೆ **ಶಿಷ್ಯ ವೇತನವನ್ನು ಏಕರೂಪವಾಗಿ ಪರಿಷ್ಕರಿಸಿ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1,000/- ಗಳನ್ನು ನಿಗಧಿಪಡಿಸಿ ಆದೇಶಿಸಿದೆ**.

ಮುಂದುವರೆದು, ರಾಜ್ಯದಲ್ಲಿನ ಸರ್ಕಾರಿ ಶುಶ್ರೂಷಾ ಶಾಲೆಗಳಲ್ಲಿ ಸರ್ಕಾರಿ ಕೋಟಾದಡಿಯ ಸೀಟುಗಳ ವ್ಯಾಸಂಗಕ್ಕೆ ಅಭ್ಯರ್ಥಿಗಳು ಪಾವತಿಸುವ ಶುಲ್ಕವನ್ನು ವೈದ್ಯಕೀಯ ಅಧೀಕ್ಷಕರು/ಜಿಲ್ಲಾ ಶಸ್ತ್ರಚಿಕಿತ್ಸಕರು ಹಾಗೂ ಪ್ರಾಂಶುಪಾಲರು, ಸರ್ಕಾರಿ ಶುಶ್ರೂಷಾ ಶಾಲೆ ಇವರ ಜಂಟಿ ಖಾತೆಯೊಂದಿಗೆ ಪಡೆಯಲು ಹಾಗೂ ಸದರಿ ಶುಲ್ಕದ ಮೊತ್ತವನ್ನು ಶುಶ್ರೂಷಾ ಶಾಲೆಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳಲು ಸರ್ಕಾರದ ಅನುಮೋದನೆ ಪಡೆಯತಕ್ಕದ್ದು.

ಆದುದರಿಂದ ರಾಜ್ಯದಲ್ಲಿನ ಸರ್ಕಾರಿ ಶುಶ್ರೂಷಾ ಶಾಲೆಗಳು ಹಾಗೂ ಖಾಸಗಿ ಶುಶ್ರೂಷಾ ಶಾಲೆಯವರು ಸರ್ಕಾರವು ಹೊರಡಿಸಿರುವ ಆದೇಶದಂತೆ ಕ್ರಮವಹಿಸಲು ತಿಳಿಸಲಾಗಿದೆ.

ಕಾರ್ಯದರ್ಶಿಗಳು
ಕ.ರಾ.ಶು.ಪ.ಮಂ. ಬೆಂಗಳೂರು.

ವಿಶೇಷಾಧಿಕಾರಿಗಳು
ಕರ್ನಾಟಕ ಶುಶ್ರೂಷಾ ಮತ್ತು ಅರೆವೈದ್ಯಕೀಯ
ವಿಜ್ಞಾನಗಳ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ,
ಬೆಂಗಳೂರು.

ಪ್ರತಿಯನ್ನು ಇವರ ಮಾಹಿತಿಗಾಗಿ ನೀಡಲಾಗಿದೆ.

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಸಹಾಯಕ ನಿರ್ದೇಶಕರು (ನರ್ಸಿಂಗ್) ವೈದ್ಯಕೀಯ ನಿರ್ದೇಶನಾಲಯ ಬೆಂಗಳೂರು.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿನ ಸರ್ಕಾರಿ ಹಾಗೂ ಖಾಸಗಿ ಶುಶ್ರೂಷಾ ಶಾಲೆಗಳಲ್ಲಿ ಸರ್ಕಾರಿ ಕೋಟಾದಡಿ ಜಿ.ಎನ್.ಎಂ. (GNM) ಕೋರ್ಸ್‌ನ ಪ್ರವೇಶ ಶುಲ್ಕವನ್ನು ಮತ್ತು ವಿದ್ಯಾರ್ಥಿಗಳಿಗೆ ಶಿಷ್ಯ ವೇತನವನ್ನು ನಿಗದಿಪಡಿಸುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಆಕುಕ 267 ಎಂಎಸ್ಎಫ್ 2006, ದಿನಾಂಕ:13.11.2007.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:02-08-2025ರಂದು ಜರುಗಿದ ಸಭೆಯ ನಡವಳಿ.
3. ಕರ್ನಾಟಕ ರಾಜ್ಯ ಶುಶ್ರೂಷಾ ಪರೀಕ್ಷಾ ಮಂಡಳಿ ಇವರ ಏಕ ಕಡತ ಸಂಖ್ಯೆ: KSDNEB/EST/36/2025.

*******

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿರುವ ಖಾಸಗಿ ನರ್ಸಿಂಗ್ ಶಾಲೆಗಳಲ್ಲಿ ಸರ್ಕಾರಿ ಕೋಟಾದಡಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ವಾರ್ಷಿಕ ಶುಲ್ಕವನ್ನು 2008-09ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಈ ಕೆಳಗಿನಂತೆ ಪರಿಷ್ಕರಿಸಿ ನಿಗಧಿಗೊಳಿಸಲಾಗಿದೆ.

| ಕ್ರ. ಸಂ. | ಬಾಬ್ತು | ಶುಲ್ಕ ರೂ. ಗಳಲ್ಲಿ |
|---|---|---|
| 1 | ಹಾಜರಾತಿ ಶುಲ್ಕ | 300/- |
| 2 | ಬೋಧನಾ ಶುಲ್ಕ | 3,600/- |
| 3 | ಗ್ರಂಥಾಲಯ ಶುಲ್ಕ | 250/- |
| 4 | ಪ್ರಯೋಗಾಲಯ ಶುಲ್ಕ | 250/- |
| 5 | ಕ್ರೀಡಾ ಶುಲ್ಕ | 100/- |
| | ಒಟ್ಟು | 4500/- |

ಮೇಲೆ ಓದಲಾದ (2)ರ ಸಭಾ ನಡವಳಿಯಲ್ಲಿ ರಾಜ್ಯದಲ್ಲಿನ ಸರ್ಕಾರಿ ಶುಶ್ರೂಷಾ ಶಾಲೆಗಳಲ್ಲಿ ಜಿ.ಎನ್.ಎಂ. ಕೋರ್ಸ್ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ವಾರ್ಷಿಕ ಶುಲ್ಕ ರೂ.5000/- ಹಾಗೂ ಖಾಸಗಿ ಶುಶ್ರೂಷಾ ಶಾಲೆಗಳಲ್ಲಿ ಸರ್ಕಾರದ ಕೋಟಾದಡಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಹಾಜರಾತಿ ಶುಲ್ಕ, ಬೋಧನಾ ಶುಲ್ಕ, ಗ್ರಂಥಾಲಯ ಶುಲ್ಕ, ಪ್ರಯೋಗಾಲಯ ಶುಲ್ಕ ಹಾಗೂ ಕ್ರೀಡಾ ಶುಲ್ಕ ಒಳಗೊಂಡಂತೆ ರೂ.6000/- ಗಳನ್ನು ನಿಗಧಿಪಡಿಸಲು ಹಾಗೂ ಎಲ್ಲಾ ವರ್ಷದ ವಿದ್ಯಾರ್ಥಿಗಳಿಗೆ ಅನ್ವಯಿಸುವಂತೆ ಶಿಷ್ಯ ವೇತನವನ್ನು ಏಕ ರೂಪವಾಗಿ ಪರಿಷ್ಕರಣೆ ಮಾಡಿ ಪ್ರಥಮ, ದ್ವಿತೀಯ ಹಾಗೂ ತೃತೀಯ ವರ್ಷದ ಜಿ.ಎನ್.ಎಮ್. ವಿದ್ಯಾರ್ಥಿಗಳಿಗೆ ಪ್ರತಿ ಮಾಹೆ ಪ್ರತಿ ವಿದ್ಯಾರ್ಥಿಗಳಿಗೆ ರೂ.1000/- ಗಳನ್ನು ನಿಗಧಿಗೊಳಿಸಲು ತೀರ್ಮಾನಿಸಲಾಗಿರುತ್ತದೆ.

ಮೇಲೆ ಓದಲಾದ (3)ರ ಏಕ ಕಡತದಲ್ಲಿ ರಾಜ್ಯದಲ್ಲಿನ ಸರ್ಕಾರಿ ಶುಶ್ರೂಷಾ ಶಾಲೆಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ವಾರ್ಷಿಕ ಶುಲ್ಕ ರೂ.5000/- ಹಾಗೂ ಖಾಸಗಿ ಶುಶ್ರೂಷಾ ಶಾಲೆಗಳಲ್ಲಿ ಸರ್ಕಾರದ ಕೋಟಾದಡಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಹಾಜರಾತಿ ಶುಲ್ಕ, ಬೋಧನಾ ಶುಲ್ಕ, ಗ್ರಂಥಾಲಯ ಶುಲ್ಕ, ಪ್ರಯೋಗಾಲಯ ಶುಲ್ಕ ಹಾಗೂ ಕ್ರೀಡಾ ಶುಲ್ಕ ಒಳಗೊಂಡಂತೆ ರೂ.6000/- ಗಳನ್ನು ನಿಗಧಿಪಡಿಸಿ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ರಾಜ್ಯದಲ್ಲಿನ ಸರ್ಕಾರಿ ಶುಶ್ರೂಷಾ ಶಾಲೆಗಳಲ್ಲಿ ಜಿ.ಎನ್.ಎಂ. ಕೋರ್ಸ್ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ವಾರ್ಷಿಕ ಶುಲ್ಕ ರೂ.5000/- ಹಾಗೂ ಖಾಸಗಿ ಶುಶ್ರೂಷಾ ಶಾಲೆಗಳಲ್ಲಿ ಸರ್ಕಾರದ ಕೋಟಾದಡಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಹಾಜರಾತಿ ಶುಲ್ಕ, ಬೋಧನಾ ಶುಲ್ಕ, ಗ್ರಂಥಾಲಯ ಶುಲ್ಕ, ಪ್ರಯೋಗಾಲಯ ಶುಲ್ಕ ಹಾಗೂ ಕ್ರೀಡಾ ಶುಲ್ಕ ಒಳಗೊಂಡಂತೆ ರೂ.6000/- ಗಳನ್ನು ನಿಗಧಿಪಡಿಸಲು ಹಾಗೂ ಜಿ.ಎನ್.ಎಮ್. ಕೋರ್ಸ್‌ನ ಎಲ್ಲಾ ವರ್ಷಗಳ ವಿದ್ಯಾರ್ಥಿಗಳಿಗೆ ಅನ್ವಯಿಸುವಂತೆ ಏಕ ರೂಪದ ಶಿಷ್ಯ ವೇತನವನ್ನು ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1000/- ಗಳೆಂದು ನಿಗಧಿಗೊಳಿಸಲು ತೀರ್ಮಾನಿಸಲಾಗಿದ್ದು, ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 279 ಎಂಎಸ್ಎಫ್ 2025, ಬೆಂಗಳೂರು,</u>**
**<u>ದಿನಾಂಕ:11.09.2025</u>**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, 2025-26 ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ ರಾಜ್ಯದಲ್ಲಿನ ಸರ್ಕಾರಿ ಶುಶ್ರೂಷಾ ಶಾಲೆಗಳಲ್ಲಿ ಜಿ.ಎನ್.ಎಂ. ಕೋರ್ಸ್ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ವಾರ್ಷಿಕ ಶುಲ್ಕವನ್ನು ರೂ. 5000/- (ರೂಪಾಯಿ ಐದು ಸಾವಿರಗಳು ಮಾತ್ರ) ಗಳಿಗೆ ನಿಗಧಿಪಡಿಸಿ ಹಾಗೂ ರಾಜ್ಯದಲ್ಲಿನ ಖಾಸಗಿ ಶುಶ್ರೂಷಾ ಶಾಲೆಗಳಲ್ಲಿ ಸರ್ಕಾರಿ ಕೋಟಾದಡಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಹಾಜರಾತಿ ಶುಲ್ಕ, ಬೋಧನಾ ಶುಲ್ಕ, ಗ್ರಂಥಾಲಯ ಶುಲ್ಕ, ಪ್ರಯೋಗಾಲಯ ಶುಲ್ಕ ಹಾಗೂ ಕ್ರೀಡಾ ಶುಲ್ಕ ಒಳಗೊಂಡಂತೆ ವಾರ್ಷಿಕ ಶುಲ್ಕವನ್ನು ರೂ. 6000/- (ರೂಪಾಯಿ ಆರು ಸಾವಿರಗಳು ಮಾತ್ರ) ಗಳಿಗೆ ಪರಿಷ್ಕರಿಸಿ ಆದೇಶಿಸಿದೆ.

2025-26 ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಗೆ ಬರುವ ರಾಜ್ಯದಲ್ಲಿನ ಸರ್ಕಾರಿ ಶುಶ್ರೂಷಾ ಶಾಲೆಗಳಲ್ಲಿನ ಎಲ್ಲಾ ವರ್ಷದ ಜಿ.ಎನ್.ಎಮ್. ವಿದ್ಯಾರ್ಥಿಗಳಿಗೆ ಅನ್ವಯಿಸುವಂತೆ ಶಿಷ್ಯ ವೇತನವನ್ನು ಏಕರೂಪವಾಗಿ ಪರಿಷ್ಕರಿಸಿ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1000/- (ರೂಪಾಯಿ ಒಂದು ಸಾವಿರಗಳು ಮಾತ್ರ) ಗಳನ್ನು ನಿಗಧಿಪಡಿಸಿ ಆದೇಶಿಸಿದೆ.

ಮುಂದುವರೆದು, ರಾಜ್ಯದಲ್ಲಿನ ಸರ್ಕಾರಿ ಶುಶ್ರೂಷಾ ಶಾಲೆಗಳಲ್ಲಿ ಮತ್ತು ಖಾಸಗಿ ಶುಶ್ರೂಷಾ ಶಾಲೆಗಳಲ್ಲಿ ಸರ್ಕಾರಿ ಕೋಟಾದಡಿಯ ಸೀಟುಗಳ ವ್ಯಾಸಂಗಕ್ಕೆ ಅಭ್ಯರ್ಥಿಗಳು ಪಾವತಿಸುವ ಶುಲ್ಕವನ್ನು ವೈದ್ಯಕೀಯ ಅಧೀಕ್ಷಕರು/ಜಿಲ್ಲಾ ಶಸ್ತ್ರಚಿಕಿತ್ಸಕರು ಹಾಗೂ ಪ್ರಾಂಶುಪಾಲರು, ಸರ್ಕಾರಿ ಶುಶ್ರೂಷಾ ಶಾಲೆ ಇವರ ಜಂಟಿ ಖಾತೆಯೊಂದಿಗೆ ಪಡೆಯಲು ಹಾಗೂ ಸದರಿ ಶುಲ್ಕದ ಮೊತ್ತವನ್ನು ಶುಶ್ರೂಷಾ ಶಾಲೆಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಉಪಯೋಗಿಸಿಕೊಳ್ಳಲು ಸರ್ಕಾರದ ಅನುಮೋದನೆ ಪಡೆಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/9

**(ಬಿ.ಎನ್. ಪ್ರವೀಣ್)**
ಸರ್ಕಾರದ ಅಧೀನ ಕಾರ್ಯದರ್ಶಿ-3,
ವೈದ್ಯಕೀಯ ಶಿಕ್ಷಣ ಇಲಾಖೆ.

11/09/25

**ಇವರಿಗೆ:**

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿ.ಎಂ.ಸಿ.ಆರ್. & ಐ. ಹಳೆ ಕಟ್ಟಡ, ಕೆ.ಆರ್. ರಸ್ತೆ, ಬೆಂಗಳೂರು-560002.
2. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು, ಬೆಂಗಳೂರು.
3. ವಿಶೇಷಾಧಿಕಾರಿ, ಕರ್ನಾಟಕ ರಾಜ್ಯ ಶುಶ್ರೂಷಾ ಹಾಗೂ ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ, ಬೆಂಗಳೂರು.

4. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಶುಶ್ರೂಷಾ ಪರೀಕ್ಷಾ ಮಂಡಳಿ, ಬೆಂಗಳೂರು.
5. ರಾಜ್ಯದಲ್ಲಿನ ಎಲ್ಲಾ ಸರ್ಕಾರಿ ಶುಶ್ರೂಷಾ ಶಾಲೆಗಳ ಪ್ರಾಂಶುಪಾಲರಿಗೆ (ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರ ಮೂಲಕ).
6. ರಾಜ್ಯದಲ್ಲಿನ ಎಲ್ಲಾ ಖಾಸಗಿ ಶುಶ್ರೂಷಾ ಶಾಲೆಗಳ ಪ್ರಾಂಶುಪಾಲರಿಗೆ (ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರ ಮೂಲಕ).
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.